# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಜಲಾಶಯಗಳಲ್ಲಿ ಪಂಜರ ಮೀನು ಕೃಷಿ ಯೋಜನೆಯಡಿ ಪಂಜರ ಮೀನು ಕೃಷಿ ಯೋಜನೆಯನ್ನು ಅನುಷ್ಠಾನಗೊಳಿಸಲು ರಾಜ್ಯ ಮಟ್ಟದ ಅನುಮೋದನಾ ಸಮಿತಿಯನ್ನು ರಚಿಸುವ ಬಗ್ಗೆ.

RKVY
21/1/16
G-655

ಓದಲಾಗಿದೆ:- (1) ದಿನಾಂಕ: 02-07-2015 ರಂದು ನಡೆದ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯ 13ನೇ ರಾಜ್ಯ ಮಟ್ಟದ ಮಂಜೂರಾತಿ ಸಭೆಯ ನಡವಳಿ.

(2) ಮೀನುಗಾರಿಕೆ ನಿರ್ದೇಶಕರ ಪತ್ರ ಸಂಖ್ಯೆ: ಡಿಎಫ್/10/ ರಾ.ಕೃ.ವಿ.ಯೋ./2015, ದಿನಾಂಕ: 11-01-2016.

******

## ಪ್ರಸ್ತಾವನೆ:

ರಾಜ್ಯ ಸರ್ಕಾರವು 2015-16ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-80 ರಲ್ಲಿ "ಮಂಡ್ಯ ಜಿಲ್ಲೆ, ಕೆ.ಆರ್.ಸಾಗರ ಜಲಾಶಯದಲ್ಲಿ ಪಂಜರಗಳಲ್ಲಿ ಮೀನು ಕೃಷಿಯನ್ನು ಪ್ರಾಯೋಗಿಕವಾಗಿ ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿದ್ದು, ಇದನ್ನು ರಾಜ್ಯದ ಇತರೆ 5 ಜಲಾಶಯಗಳಿಗೆ ಖಾಸಗಿ ಸಹಭಾಗಿತ್ವದಲ್ಲಿ ಅನುಷ್ಠಾನಗೊಳಿಸಲಾಗುವುದು" ಎಂದು ಘೋಷಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ 13ನೇ ರಾಜ್ಯ ಮಟ್ಟದ ಮಂಜೂರಾತಿ ಸಭೆಯ ನಡವಳಿಯಲ್ಲಿ, ಮೀನುಗಾರಿಕೆ ಇಲಾಖೆಯ "ಜಲಾಶಯಗಳಲ್ಲಿ ಪಂಜರ ಮೀನು ಕೃಷಿ" ಯೋಜನೆಯನ್ನು ರೂ.2.88 ಕೋಟಿಗಳ ಯೋಜನಾ ವೆಚ್ಚದಲ್ಲಿ ಕೈಗೊಳ್ಳಲು ಅನುಮೋದಿಸಿದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ನಿರ್ದೇಶಕರು, ಮೀನುಗಾರಿಕೆ ಇಲಾಖೆ ಇವರ ಪತ್ರದಲ್ಲಿ, ಸರ್ಕಾರದ ಆದೇಶ ಸಂಖ್ಯೆ: ಪಸಂಮೀ/125/ಮೀಇಇ/2013, ದಿನಾಂಕ: 21-02-2014 ರನ್ವಯ ಆಯ್ದ ಜಲಾಶಯದ ಭಾಗವನ್ನು ತೇಲುವ ಪಂಜರ ಸ್ಥಾಪಿಸಲು 10 ವರ್ಷಗಳ ಅವಧಿಗೆ ಉದ್ದಿಮೆದಾರರಿಗೆ, ಸಹಕಾರಿ ಸಂಘ/ಸಂಸ್ಥೆಗಳಿಗೆ ನೀಡಲು ಅವಕಾಶ ಕಲ್ಪಿಸಲಾಗಿದೆ. ಆದ್ದರಿಂದ, ಸದರಿ ಯೋಜನೆಯನ್ನು ಮೀನುಗಾರಿಕೆ ಮಹಾಮಂಡಳಿ / ಮೀನುಗಾರರ ಸಹಕಾರ ಸಂಘಗಳ ಮೂಲಕ ಕೈಗೊಳ್ಳಲು ಉದ್ದೇಶಿಸಲಾಗಿದೆ. ಪ್ರತಿ ಘಟಕಕ್ಕೆ ರೂ.90.00 ಲಕ್ಷ ವೆಚ್ಚದಲ್ಲಿ ಯೋಜನೆಯ ಅನುದಾನದಿಂದ ಭರಿಸಬಹುದಾಗಿದೆ ಎಂದು ತಿಳಿಸಿರುತ್ತಾರೆ.

"ಜಲಾಶಯಗಳಲ್ಲಿ ಪಂಜರ ಮೀನು ಕೃಷಿ" ಎಂಬ ಯೋಜನೆಯನ್ನು ರಾಜ್ಯ ಮಟ್ಟದ ಅನುಮೋದನಾ ಸಮಿತಿಯನ್ನು ರಚಿಸಿ, ಅದರ ಅನುಮೋದನೆಯ ಮೇರೆಗೆ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ರೂ.180.00 ಲಕ್ಷಗಳ ಸಹಾಯಧನದೊಂದಿಗೆ ಇಲಾಖಾ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಅನುಷ್ಠಾನಗೊಳಿಸಲು ಆಡಳಿತಾತ್ಮಕ ಮಂಜೂರಾತಿ ನೀಡಬೇಕೆಂದು ಕೋರಿರುತ್ತಾರೆ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸದರಿ ಯೋಜನೆಯಡಿ ರಾಜ್ಯ ಮಟ್ಟದ ಅನುಮೋದನಾ ಸಮಿತಿಯನ್ನು ರಚಿಸಲು ತೀರ್ಮಾನಿಸಿ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಪಸಂಮೀ 10 ಮೀಇಯೋ 2016, ಬೆಂಗಳೂರು ದಿನಾಂಕ: 16-01-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ "ಜಲಾಶಯಗಳಲ್ಲಿ ಪಂಜರ ಮೀನು ಕೃಷಿ" ಎಂಬ ಯೋಜನೆಯ ಅನುಷ್ಠಾನದ ಉಸ್ತುವಾರಿ ನಡೆಸಲು ಹಾಗೂ ಮೀನುಗಾರಿಕೆ ಸಹಕಾರ ಸಂಘಗಳ / ಮಹಾಮಂಡಳಿಯ ಅರ್ಜಿಗಳನ್ನು ಪರಿಗಣಿಸಿ, ಆಯ್ಕೆ ಮಾಡಲು, ಬೆಳಸಬೇಕಾದ ಮೀನಿನ ಜಾತಿ, ಗಾತ್ರ, ನೀಡಬೇಕಾಗಿರುವ ಆಹಾರ ನಿರ್ವಹಣೆ ಇತರೆ ಅಗತ್ಯ ತಾಂತ್ರಿಕ ಮಾಹಿತಿ ನೀಡಲು ಕೆಳಕಂಡಂತೆ ರಾಜ್ಯ ಮಟ್ಟದ ಅನುಮೋದನಾ ಸಮಿತಿಯನ್ನು ರಚಿಸಲಾಗಿದೆ.

| | | |
|---|---|---|
| 1) | ಮೀನುಗಾರಿಕೆ ನಿರ್ದೇಶಕರು | - ಅಧ್ಯಕ್ಷರು |
| 2) | ಮುಖ್ಯಸ್ಥರು,<br>ಕೇಂದ್ರೀಯ ಒಳನಾಡು ಮೀನುಗಾರಿಕೆ ಸಂಶೋಧನಾ ಕೇಂದ್ರ, ಬೆಂಗಳೂರು ಅಥವಾ ಸಿ.ಐ.ಎಫ್.ಆರ್.ಐ. ಅಥವಾ ಅವರ ಪ್ರತಿನಿಧಿ ವಿಜ್ಞಾನಿ | - ಸದಸ್ಯರು |
| 3) | ಮುಖ್ಯಸ್ಥರು,<br>ಕೇಂದ್ರೀಯ ಸಿಹಿನೀರು ಮೀನು ಕೃಷಿ ಸಂಶೋಧನಾ ಕೇಂದ್ರ, ಬೆಂಗಳೂರು (ಸಿ.ಐ.ಎಫ್.ಎ.) ಅಥವಾ ಅವರ ಪ್ರತಿನಿಧಿ ವಿಜ್ಞಾನಿ | - ಸದಸ್ಯರು |
| 4) | ಮುಖ್ಯಸ್ಥರು,<br>ಮೀನು ಸಂಶೋಧನಾ ಮತ್ತು ಮಾಹಿತಿ ಕೇಂದ್ರ, ಕೆ.ವಿ.ಎ.ಎಫ್.ಎಸ್.ಯು., ಬೆಂಗಳೂರು | - ಸದಸ್ಯರು |
| 5) | ಮೀನುಗಾರಿಕೆ ಜಂಟಿ ನಿರ್ದೇಶಕರು (ಕರಾವಳಿ) ಮತ್ತು<br>ಮೀನುಗಾರಿಕೆ ಜಂಟಿ ನಿರ್ದೇಶಕರು (ಒಳನಾಡು) | - ಸದಸ್ಯರು |
| 6) | ಮೀನುಗಾರಿಕೆ ಉಪ ನಿರ್ದೇಶಕರು, ಶಿವಮೊಗ್ಗ ವಲಯ ಹಾಗೂ ಮೈಸೂರು ವಲಯ | - ಸದಸ್ಯರು |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

16/1/16

(ರಶ್ಮಿ ಶಿವಶಂಕರ ಪೋಳ)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

16/01/16

**ಇವರಿಗೆ:**

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ)(ಇ&ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.

2) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು
4) ಮುಖ್ಯಸ್ಥರು, ಕೇಂದ್ರೀಯ ಒಳನಾಡು ಮೀನುಗಾರಿಕೆ ಸಂಶೋಧನಾ ಕೇಂದ್ರ, ಬೆಂಗಳೂರು (ಸಿ.ಐ.ಎಫ್.ಆರ್.ಐ.) - ಮೀನುಗಾರಿಕೆ ನಿರ್ದೇಶಕರ ಮುಖಾಂತರ.
5) ಮುಖ್ಯಸ್ಥರು, ಕೇಂದ್ರೀಯ ಸಿಹಿನೀರು ಮೀನು ಕೃಷಿ ಸಂಶೋಧನಾ ಕೇಂದ್ರ, ಬೆಂಗಳೂರು (ಸಿ.ಐ.ಎಫ್.ಎ.) - ಮೀನುಗಾರಿಕೆ ನಿರ್ದೇಶಕರ ಮುಖಾಂತರ.
6) ಮುಖ್ಯಸ್ಥರು, ಮೀನು ಸಂಶೋಧನಾ ಮತ್ತು ಮಾಹಿತಿ ಕೇಂದ್ರ, ಕೆ.ವಿ.ಎ.ಎಫ್.ಎಸ್.ಯು., ಬೆಂಗಳೂರು. - ಮೀನುಗಾರಿಕೆ ನಿರ್ದೇಶಕರ ಮುಖಾಂತರ.
7) ಮೀನುಗಾರಿಕೆ ಜಂಟಿ ನಿರ್ದೇಶಕರು (ಕರಾವಳಿ) ಮತ್ತು (ಒಳನಾಡು), ಮೀನುಗಾರಿಕೆ ನಿರ್ದೇಶನಾಲಯ, ಬೆಂಗಳೂರು.
8) ಸಂಬಂಧಪಟ್ಟ ಮೀನುಗಾರಿಕೆ ಉಪ ನಿರ್ದೇಶಕರುಗಳಿಗೆ - ಮೀನುಗಾರಿಕೆ ನಿರ್ದೇಶಕರ ಮುಖಾಂತರ.
9) ಮಾನ್ಯ ಯುವಜನ ಸೇವಾ ಮತ್ತು ಮೀನುಗಾರಿಕೆ ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
10) ಶಾಖಾ ರಕ್ಷಾ ಕಡತ / ಸಮನ್ವಯ-ಕಂಪೆಂಡಿಯಂ / ಹೆಚ್ಚಿನ ಪ್ರತಿಗಳು.